ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ: 1370

ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ ಅರಳಿ

ಉತ್ತರಿಸುವ ಸಚಿವರು : ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು

ಉತ್ತರಿಸುವ ದಿನಾಂಕ : 24.12.2021

ಕ್ರ. ಸಂ	ಪ್ರಶ್ನೆ	ಉತ್ತರ
ಅ.	ಬೀದರ್ ಜಿಲ್ಲೆಯಲ್ಲಿ ದಿನದ ಬಸ್ ಪ್ರಯಾಣಿಕರ ಸಂಖ್ಯೆಯೆಷ್ಟು; ಅದಕ್ಕನುಗುಣವಾಗಿ ಬಸ್ ಸಂಚಾರ ಇದೆಯೇ; ಇದ್ದಲ್ಲಿ, ಎಷ್ಟು ಸಂಖ್ಯೆಯ ಬಸ್‌ಗಳಿವೆ;	ಬೀದರ್ ಜಿಲ್ಲೆಯಲ್ಲಿ ಒಂದು ದಿನದ ಬಸ್ ಪ್ರಯಾಣಿಕರ ಸಂಖ್ಯೆ ಸರಾಸರಿ 1,18,772. ಸದರಿ ಪ್ರಯಾಣಿಕರ ಸುಗಮ ಸಂಚಾರಕ್ಕಾಗಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಿಂದ 585 ಬಸ್‌ಗಳನ್ನು ಒದಗಿಸಲಾಗಿದೆ.
ಆ.	ಎಲ್ಲಾ ಹಳ್ಳಿಗಳಿಗೆ ಸಮರ್ಪಕವಾದ ಬಸ್ ಸಂಚಾರದ ವ್ಯವಸ್ಥೆಯಿದೆಯೇ; ಸಮರ್ಪಕವಾದ ಬಸ್ ಸಂಚಾರ ಇಲ್ಲದ ಗ್ರಾಮಗಳೆಷ್ಟು; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)	ಬೀದರ್ ವಿಭಾಗದಲ್ಲಿ ಒಟ್ಟು 667 ಗ್ರಾಮಗಳಿದ್ದು, ಅವುಗಳಲ್ಲಿ ಒಟ್ಟು 664 ಗ್ರಾಮಗಳಿಗೆ ಬಸ್ ಸಂಚಾರ ಕಲ್ಪಿಸಲಾಗಿದೆ. ಇನ್ನುಳಿದ 03 ಗ್ರಾಮಗಳಿಗೆ ಬಸ್ ಸಂಚಾರ ಒದಗಿಸಿರುವುದಿಲ್ಲ. ಸದರಿ ವಿವರವನ್ನು 'ಅನುಬಂಧ' ದಲ್ಲಿ ನೀಡಲಾಗಿದೆ.
ಇ.	ಅನೇಕ ಗ್ರಾಮಗಳಿಗೆ ಸಮರ್ಪಕವಾದ ಬಸ್ ವ್ಯವಸ್ಥೆಯಿಲ್ಲದೆ ಬಡ ಮಕ್ಕಳು ಶಾಲೆಯಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹ ಗ್ರಾಮಗಳಿಗೆ ಬಸ್ಸುಗಳ ಸಂಚಾರ ವ್ಯವಸ್ಥೆ ಯಾವಾಗ ಮಾಡಲಾಗುವುದು;	ಕೋವಿಡ್-19ರ ಹಿನ್ನೆಲೆಯಲ್ಲಿ ತಾತ್ಕಾಲಿಕವಾಗಿ ಸ್ಥಗಿತಗೊಳಿಸಿದ ಸಾರಿಗೆಗಳನ್ನು ಶಾಲಾ-ಕಾಲೇಜು ಪ್ರಾರಂಭವಾದ ತಕ್ಷಣ ಎಲ್ಲಾ ಸಾರಿಗೆಗಳನ್ನು ಪುನ: ಕಾರ್ಯಾಚರಣೆ ಮಾಡಲಾಗುತ್ತಿದೆ. ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ಶಾಲಾ-ಕಾಲೇಜು ಸಮಯಕ್ಕೆ ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.
ಈ.	ಜಿಲ್ಲೆಯಲ್ಲಿರುವ ಬಸ್‌ಗಳಲ್ಲಿ ಹೆಚ್ಚು ಕಿ.ಮೀ ಓಡಿರುವ ಬಸ್‌ಗಳ ಸಂಖ್ಯೆಯೆಷ್ಟು; ಕಡಿಮೆ ಕಿ.ಮೀ. ಓಡಿರುವ ಬಸ್‌ಗಳ ಸಂಖ್ಯೆಯೆಷ್ಟು?	ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಲ್ಲಿ ಅಶೋಕ ಲೈಲ್ಯಾಂಡ, ಟಾಟಾ ಹಾಗೂ ತತ್ಸಮಾನ ಮಾದರಿಯ ಸಾಮಾನ್ಯ ಬಸ್ಸುಗಳ ಜೀವಮಾನವನ್ನು 9.00 ಲಕ್ಷ ಕಿ.ಮೀ. ಹಾಗೂ ಕರೋನಾ ಹವಾನಿಯಂತ್ರಿತ ಸ್ಲೀಪರ್ ಬಸ್ಸುಗಳ ಜೀವಮಾನವನ್ನು 11.00 ಲಕ್ಷ ಕಿ.ಮೀ.ಗೆ ನಿಗದಿಪಡಿಸಲಾಗಿರುತ್ತದೆ. ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿರುವ 6 ಘಟಕಗಳಲ್ಲಿ ಒಟ್ಟಾರೆ 585

			ಬಸ್ಸುಗಳಿದ್ದು, ಈ ಪೈಕಿ 178 ಬಸ್ಸುಗಳು 9.00 ಲಕ್ಷ ಕಿ.ಮೀ. ಕ್ರಮಿಸಿದ್ದು, ಇನ್ನುಳಿದ 407 ಬಸ್ಸುಗಳು 9.00 ಲಕ್ಷ ಕಿ.ಮೀ.ಗಿಂತ ಕಡಿಮೆ ಕ್ರಮಿಸಿರುವಂತಹ ವಾಹನಗಳಾಗಿರುತ್ತವೆ.

ಸಂಖ್ಯೆ: ಟಿಡಿ 310 ಟಿಸಿಕ್ಯೂ 2021

(ಬಿ.ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು

ಪ್ರಶ್ನೆ ಸಂ:।3ರಂ ಕ್ಕೆ ಅನುಬಂಧ

ಕ್ರ.ಸಂ	ತಾಲೂಕು	ಒಟ್ಟು ಗ್ರಾಮಗಳ ಸಂಖ್ಯೆ	ಸಾರಿಗೆ ಸೌಲಭ್ಯ ಒದಗಿಸಿದ ಗ್ರಾಮಗಳ ಸಂಖ್ಯೆ	ಸಾರಿಗೆ ಸೌಲಭ್ಯ ಒದಗಿಸಬೇಕಾದ ಗ್ರಾಮಗಳ ಸಂಖ್ಯೆ
1	ಬೀದರ	95	95	0
2	ಹುಮನಾಬಾದ	151	151	0
3	ಬಸವಕಲ್ಯಾಣ	47	47	0
4	ಭಾಲ್ಕಿ	131	130	1
5	ಔರಾದ	134	133	1
6	ಕಮಲನಗರ	54	53	1
7	ಹುಲಸೂರ	18	18	0
8	ಚಿಟ್ಟಗುಪ್ಪ	37	37	0
	ಒಟ್ಟು	667	664	3

ಕ್ರ. ಸಂ.	ತಾಲೂಕು	ಗ್ರಾಮದ ಹೆಸರು	ಸಾರಿಗೆ ಸೌಲಭ್ಯ ಒದಗಿಸದೇ ಇರಲು ಕಾರಣ	ಸಾರಿಗೆ ಗ್ರಾಮಕ್ಕೆ ಪ್ರಸ್ತುತ ಎಲ್ಲಿವರೆಗೆ ಬಸ್ ಸೇವೆ ಒದಗಿಸಲಾಗಿದೆ.
1	ಕಮಲನಗರ	ಮುತಖೇಡ	ಸದರಿ ಗ್ರಾಮವು ಮುಖ್ಯ ರಸ್ತೆಯಿಂದ 2.5 ಕಿ.ಮೀ ಅಂತರದಲ್ಲಿರುತ್ತದೆ. ಪ್ರಸ್ತುತ ರಸ್ತೆ ಕಾಮಗಾರಿ ಪ್ರಗತಿಯಲ್ಲಿರುತ್ತದೆ. ಸದರಿ ಕಾಮಗಾರಿ ಪೂರ್ಣಗೊಂಡ ನಂತರ ಸಾರಿಗೆ ಸೌಲಭ್ಯ ಒದಗಿಸಲಾಗುವುದು.	ಔರಾದ-ದಾಬಕಾ-ಉದಗೀರ ಮಾರ್ಗ ವಾಗಿ ದಿನಾಲು 05 ಸರತಿಗಳ ಬಸ್ ಕಾರ್ಯಚರಣೆ ಮಾಡಲಾಗುತ್ತಿದೆ. ಸದರಿ ಗ್ರಾಮಸ್ಥರು/ ವಿದ್ಯಾರ್ಥಿಗಳು ಈ ಸರತಿಗಳ ಸದುಪಯೋಗ ಪಡೆಯುತ್ತಿದ್ದಾರೆ.
2	ಔರಾದ	ನಾಗೂರ (ಬಾಬಜಿ)	ಸದರಿ ಗ್ರಾಮವು ಮುಖ್ಯ ರಸ್ತೆಯಿಂದ 1 ಕಿ.ಮೀ ಅಂತರದಲ್ಲಿದ್ದು, ಗ್ರಾಮದ ಒಳಗೆ ಬಸ್ ತಿರುಗಿಸಲು ಸ್ಥಳ ಇರುವುದಿಲ್ಲ.	ಔರಾದ-ಸಂತಪೂರ-ಸಂಗಮ ಕ್ರಾಸ್ ಮಾರ್ಗವಾಗಿ ಭಾಲ್ಕಿಗೆ ಪ್ರತಿದಿನ 20 ಸರತಿಗಳ ಕಾರ್ಯಾಚರಣೆಯಲ್ಲಿದ್ದು, ಸದರಿ 20 ಸರತಿಗಳು ನಾಗೂರ (ಬಾಬಜಿ) ಮುಖ್ಯ ರಸ್ತೆಗೆ ನಿಲುಗಡೆ ಮಾಡುತ್ತಿವೆ. ಸದರಿ ಗ್ರಾಮಸ್ಥರು/ ವಿದ್ಯಾರ್ಥಿಗಳು ಈ ಸರತಿಗಳ ಸದುಪಯೋಗ ಪಡೆಯುತ್ತಿದ್ದಾರೆ.
3	ಭಾಲ್ಕಿ	ಎಕಲಾಸಪೂರ	ಸದರಿ ಗ್ರಾಮವು ಆನಂದವಾಡಿ ಗ್ರಾಮದಿಂದ 5 ಕಿ.ಮೀ ಅಂತರದಲ್ಲಿರುತ್ತದೆ. ಸದರಿ ಗ್ರಾಮಕ್ಕೆ ಇಲ್ಲಿಯವರೆಗೆ ಸಾರಿಗೆ ಸೌಲಭ್ಯ ಕಲ್ಪಿಸಿರುವುದಿಲ್ಲ.	ಭಾಲ್ಕಿ ಪಟ್ಟಣದಲ್ಲಿ ರಸ್ತೆಯು ತೀರಾ ಇಕ್ಕಟ್ಟಾಗಿರುವುದರಿಂದ ಬಸ್ ಕಾರ್ಯಚರಣೆಗೆ ಯೋಗ್ಯವಾಗಿರುವುದಿಲ್ಲ. ಅನಂದ ವಾಡಿವರೆಗೆ 03 ಸುತ್ತುವಳಿಗಳ ಬಸ್ ಕಾರ್ಯಾಚರಣೆ ಮಾಡಲಾಗುತ್ತಿದೆ. ಸದರಿ ಗ್ರಾಮಸ್ಥರು/ ವಿದ್ಯಾರ್ಥಿಗಳು ಈ ಸರತಿಗಳ ಸದುಪಯೋಗ ಪಡೆಯುತ್ತಿದ್ದಾರೆ.